# ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರ

ನ್ಯಾಯ ದೇಗುಲ, 1ನೇ ಮಹಡಿ, ಹೆಚ್. ಸಿದ್ದಯ್ಯ ರಸ್ತೆ, ಬೆಂಗಳೂರು-560027

****************************************************************

## ಕಾನೂನು ಸೇವೆಗಳ ಪ್ರಾಧಿಕಾರದ ಧ್ಯೇಯೋದ್ದೇಶಗಳು

- ಜನರಲ್ಲಿ ಕಾನೂನಿನ ಬಗ್ಗೆ ಅರಿವನ್ನು ಉಂಟು ಮಾಡುವುದು
- ಉಚಿತ ಕಾನೂನು ನೆರವು ಮತ್ತು ಸಲಹೆಯನ್ನು ಕೊಡುವುದು
- ಜನತಾ ನ್ಯಾಯಾಲಯ (ಲೋಕ ಅದಾಲತ್)ಗಳ ಮೂಲಕ ಪ್ರಕರಣಗಳನ್ನು ಇತ್ಯರ್ಥಗೊಳಿಸಿ ಜನರಿಗೆ ತ್ವರಿತವಾಗಿ ನ್ಯಾಯ ದೊರಕಿಸಿಕೊಡುವುದು.

## ಕಾನೂನು ಸೇವೆಗಳ ಪ್ರಾಧಿಕಾರದಿಂದ ಉಚಿತವಾಗಿ ದೊರಕುವ ಸೇವೆಗಳುಃ

- ಉಚಿತ ಕಾನೂನು ಸೇವೆ
- ಉಚಿತ ಕಾನೂನು ಸಲಹೆ
- ರಾಜೀ ಸಂಧಾನ
- ಜನತಾ ನ್ಯಾಯಾಲಯಗಳ ಮೂಲಕ ನ್ಯಾಯಾಲಯದಲ್ಲಿರುವ ಪ್ರಕರಣಗಳ ಇತ್ಯರ್ಥ
- ಮಧ್ಯಸ್ಥಿಕೆ ಕೇಂದ್ರಗಳ ಮೂಲಕ ಸಂಧಾನ ವ್ಯವಸ್ಥೆ
- ಪರ್ಯಾಯ ವ್ಯಾಜ್ಯ ಪರಿಹಾರದ ವ್ಯವಸ್ಥೆ
- ವ್ಯಾಜ್ಯಪೂರ್ವ ಸಮಸ್ಯೆಗಳ ಪರಿಹಾರ
- ಕಾನೂನು ಸಾಕ್ಷರತೆ
- ಖಾಯಂ ಜನತಾ ಅದಾಲತ್ (P.L.A) ಕೆಲವು ಸಾರ್ವಜನಿಕ ಉಪಯುಕ್ತ ಸೇವೆಗಳ ಮೂಲಕ ವಿವಾದಗಳ ಇತ್ಯರ್ಥ

## ಉಚಿತ ಕಾನೂನು ಸಲಹೆ ಮತ್ತು ನೆರವನ್ನು ಯಾರಿಗೆ ಕೊಡಬಹುದುಃ

- ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಕ್ಕೆ ಸೇರಿದವರು
- ಮಹಿಳೆಯರು ಮತ್ತು ಮಕ್ಕಳು
- ಕಾರ್ಖಾನೆಯ ಕಾರ್ಮಿಕರು
- ಗುಂಪು ಘರ್ಷಣೆ, ಗಲಭೆ, ಪ್ರವಾಹ, ಕ್ಷಾಮ, ಭೂಕಂಪ, ಕೈಗಾರಿಕಾ ವಿನಾಶ ಮುಂತಾದವುಗಳಿಗೆ ತುತ್ತಾದವರು
- ಮತೀಯ ಕಾರಣದಿಂದ ದೌರ್ಜನ್ಯಕ್ಕೆ ಬಲಿಯಾದವರು
- ಮಾನಸಿಕ ಅಥವಾ ಬೇರೆ ಯಾವುದೇ ನ್ಯೂನ್ಯತೆ ಹೊಂದಿರುವವರು
- ರಕ್ಷಣಾ ಗೃಹ, ಮನೋರೋಗಿಗಳ ಆಸ್ಪತ್ರೆ ಮುಂತಾದವುಗಳಲ್ಲಿ ಅಭಿರಕ್ಷೆಯಲ್ಲಿರುವವರು
- ದೈಹಿಕ ವ್ಯಾಪಾರ ಅಥವಾ ಜೀತಕ್ಕೊಳಗಾದವರು

- ವಾರ್ಷಿಕ ಆದಾಯ **ಒಂದು ಲಕ್ಷ ರೂಪಾಯಿಗಳಿಗಿಂತ (Rs. 1 Lakh) ಕಡಿಮೆ** ಇರುವ ಎಲ್ಲಾ ವರ್ಗದ ಜನರು
- ಸರ್ವೋಚ್ಚ ನ್ಯಾಯಾಲಯದಲ್ಲಿ (ಸುಪ್ರೀಂ ಕೋರ್ಟ್‌ನ) ಕಾನೂನು ಸೇವೆಯನ್ನು ಪಡೆಯಲು ವಾರ್ಷಿಕ ಆದಾಯ **ಒಂದು ಲಕ್ಷ ಇಪ್ಪತ್ತೈದು ಸಾವಿರಗಳಿಗಿಂತ ಕಡಿಮೆ (Rs. 1.25 Lakh)** ಇರುವ ಎಲ್ಲಾ ವರ್ಗದ ಜನರು ಉಚಿತ ಕಾನೂನು ಸೇವೆಯನ್ನು ಪಡೆಯಲು ಅರ್ಹರಿರುತ್ತಾರೆ

- ಕರ್ನಾಟಕ ಸಂತ್ರಸ್ತರ ಪರಿಹಾರ ಯೋಜನೆ, 2011 (Karnataka Victim Compensation Scheme, 2011) ಅಡಿಯಲ್ಲಿ ಭಾರತ ದಂಡ ಪ್ರಕ್ರಿಯಾ ಸಂಹಿತೆ (Cr.P.C) ಕಲಂ **357 ಎ** ಅಡಿಯಲ್ಲಿ ಅಪರಾಧದಿಂದ ವೈಯಕ್ತಿಕ ಮತ್ತು ಆಸ್ತಿಗೆ ಸಂಬಂಧಪಟ್ಟಂತೆ ನಷ್ಟ ಮತ್ತು ಹಾನಿಯನ್ನು ಅನುಭವಿಸಿದ ಸಂತ್ರಸ್ತರು ಮತ್ತು ಅವರ ಅವಲಂಬಿತರಿಗೆ ಪರಿಹಾರ ಮತ್ತು ಪುನರ್ವಸತಿ ಒದಗಿಸುವ ಸಲುವಾಗಿ “ಸಂತ್ರಸ್ತರ ಪರಿಹಾರ ಯೋಜನೆ” (ವಿಕ್ಟಿಮ್ ಕಾಂಪನ್ಸೇಶನ್ ಸ್ಕೀಮ್) ಕರ್ನಾಟಕ ಸರ್ಕಾರವು ಹೊರಡಿಸಿರುವ ಅಧಿಸೂಚನೆ ಸಂಖ್ಯೆ ಎಚ್.ಡಿ.1 ಪಿಸಿಬಿ. 2011 ದಿನಾಂಕ: 22.02.2012 ರಂದು ಪ್ರಾರಂಭವಾಗಿದ್ದು (ಕರ್ನಾಟಕ ರಾಜ್ಯ ಪತ್ರದಲ್ಲಿ ದಿನಾಂಕ: 19.04.2012ರಂದು ಪ್ರಕಟಣೆಯಾಗಿದ್ದು). ಆ ಅಧಿಸೂಚನೆಯ ಪ್ರಕಾರ ಅಪರಾಧದಿಂದ ನಷ್ಟ ಮತ್ತು ಹಾನಿಯನ್ನು ಅನುಭವಿಸಿದ ಸಂತ್ರಸ್ತರು ಮತ್ತು ಅವರ ಅವಲಂಬಿತರು ಪರಿಹಾರ ಧನವನ್ನು ಪಡೆಯಬಹುದಾಗಿದೆ.
- ರಾಷ್ಟ್ರೀಯ ಕಾನೂನು ಸೇವೆಗಳ ಪ್ರಾಧಿಕಾರದ ವಿಶೇಷ ಯೋಜನೆಯಡಿಯಲ್ಲಿ ಅಸಂಘಟಿತ ವಲಯದ ಕಾರ್ಮಿಕರಿಗೆ ಅಂದರೆ **ಕಟ್ಟಡ ನಿರ್ಮಾಣ ಕಾರ್ಮಿಕರು, ಬೀಡಿ ಕಾರ್ಮಿಕರು** ಹಾಗೂ ಇತರೆ ಅಸಂಘಟಿತ ವಲಯದ **ಕೂಲಿ** ಕಾರ್ಮಿಕರು ಉಚಿತ ಕಾನೂನು ಸೇವೆಯನ್ನು ರಾಜ್ಯ ಪ್ರಾಧಿಕಾರದ/ಜಿಲ್ಲಾ ಪ್ರಾಧಿಕಾರದ ಮೂಲಕ ಪಡೆಯಬಹುದಾಗಿದೆ
- ರಾಷ್ಟ್ರೀಯ ಕಾನೂನು ಸೇವೆಗಳ ಪ್ರಾಧಿಕಾರದ ವಿಶೇಷ ಯೋಜನೆಯಡಿಯಲ್ಲಿ ಮಾನಸಿಕ ದೌರ್ಬಲ್ಯದಿಂದ ನರಳುತ್ತಿರುವ ರೋಗಿಗಳೂ ಸಹ ಉಚಿತ ಕಾನೂನು ಸೇವೆಯನ್ನು ರಾಜ್ಯ/ಜಿಲ್ಲಾ ಪ್ರಾಧಿಕಾರದ ಮೂಲಕ ಪಡೆಯಬಹುದಾಗಿದೆ
- ರಾಷ್ಟ್ರೀಯ ಕಾನೂನು ಸೇವೆಗಳ ಪ್ರಾಧಿಕಾರ ಕಾನೂನು ಸೇವೆಗಳ ಸಂಸ್ಥೆಗಳಿಗೆ ಸೂಚಿಸಿರುವ ಮಾರ್ಗದರ್ಶನದಂತೆ ರಾಜ್ಯದ ಎಲ್ಲಾ ಕೇಂದ್ರದಲ್ಲಿರುವ ಬಾಲ ನ್ಯಾಯ ಮಂಡಳಿಯ ರಕ್ಷೆಯಲ್ಲಿರುವ ಮಕ್ಕಳು ಉಚಿತ ಕಾನೂನು ಸೇವೆಯನ್ನು ರಾಜ್ಯ/ಜಿಲ್ಲಾ ಪ್ರಾಧಿಕಾರದಿಂದ ಪಡೆಯಬಹುದಾಗಿರುತ್ತದೆ. ಈ ನ್ಯಾಯ ಮಂಡಳಿಯಲ್ಲಿರುವ ಮಕ್ಕಳ ಸಮಸ್ಯೆಗಳ ಬಗ್ಗೆ ನುರಿತ ವಕೀಲರಿಂದ ಸಮಸ್ಯೆಗಳನ್ನು ಪರಿಹರಿಸುವ ಕ್ರಮ, ಮಕ್ಕಳ ಸಂರಕ್ಷಣೆ ಇತರೇ ವ್ಯವಸ್ಥೆಯನ್ನು ರಾಜ್ಯ/ಜಿಲ್ಲಾ ಪ್ರಾಧಿಕಾರದ ಮೂಲಕ ವ್ಯವಸ್ಥೆ ಮಾಡಲಾಗುವುದು
- ರಾಜ್ಯದ ಎಲ್ಲಾ ಜಿಲ್ಲಾ ಕೇಂದ್ರದಲ್ಲಿರುವ ಬಾಲ ನ್ಯಾಯ ಮಂಡಳಿ ಅಡಿಯಲ್ಲಿ ಬರುವ ಮಕ್ಕಳಿಗೆ ಉಚಿತ ಕಾನೂನು ಸೇವೆ ನೀಡಲಾಗುವುದು
- ವಿಚಾರಣಾಧೀನ ಖೈದಿಗಳಿಗೆ ಉಚಿತ ಕಾನೂನು ಸೇವೆ ನೀಡಲಾಗುವುದು

## **“ಉಚಿತ ಕಾನೂನು ನೆರವು”**

ಎಂದರೆ ಪ್ರಕರಣವೊಂದಕ್ಕೆ ಸಂಬಂಧಿಸಿದಂತೆ ವಕೀಲರ ಫೀಸು ಮತ್ತು ನ್ಯಾಯಾಲಯ ಶುಲ್ಕ ಹಾಗೂ ಇತರೆ ವೆಚ್ಚಗಳನ್ನು ಸಂಪೂರ್ಣವಾಗಿ ರಾಜ್ಯ ಪ್ರಾಧಿಕಾರದಿಂದಲೇ ಭರಿಸಲಾಗುವುದು.

## **ಉಚಿತ ಕಾನೂನು ಸಲಹಾ ಕೇಂದ್ರಗಳು:**

ಜನಸಾಮಾನ್ಯರ ಇತ್ತೀಚಿನ ಬದುಕಿನಲ್ಲಿ ಒಂದಲ್ಲ ಒಂದು ರೀತಿ ಕಾನೂನು ತೊಡಕುಗಳು ಎದುರಾಗಿ ಅವರು ಗೊಂದಲಕ್ಕೀಡಾಗುವ ಪರಿಸ್ಥಿತಿ ನಿರ್ಮಾಣವಾಗುತ್ತಿದೆ. ಈ ಗೊಂದಲವನ್ನು ನಿವಾರಿಸಿ ಜನಸಾಮಾನ್ಯರ ಬದುಕನ್ನು ಸೌಹಾರ್ದಯುತವಾಗಿ ನಡೆಸುವ ಉದ್ದೇಶದಿಂದ ಉಚಿತ ಕಾನೂನು ಸಲಹಾ ಕೇಂದ್ರಗಳನ್ನು ಪ್ರಾರಂಭಿಸಲಾಗಿರುತ್ತದೆ. ಸದರಿ ಕೇಂದ್ರಗಳಲ್ಲಿ ಪ್ರಾಧಿಕಾರದ ವಕೀಲರುಗಳು ಉಚಿತ ಕಾನೂನು ಸಲಹೆಗಾಗಿ ಬರುವ ಸಾರ್ವಜನಿಕರ ಸಮಸ್ಯೆಯನ್ನು ಪರಿಹರಿಸುವ ಪ್ರಯತ್ನ ಮಾಡುತ್ತಾರೆ.

ಸಾರ್ವಜನಿಕರಿಗಾಗಿ ರಾಜ್ಯ ಪ್ರಾಧಿಕಾರವು ಈ ಕೆಳಕಂಡ ಸ್ಥಳಗಳಲ್ಲಿ ಹಾಗೂ ರಾಜ್ಯದ ಎಲ್ಲಾ ಜಿಲ್ಲಾ ಮತ್ತು ತಾಲ್ಲೂಕು ಕೇಂದ್ರಗಳಲ್ಲಿ ಉಚಿತ ಕಾನೂನು ಸಲಹಾ ಕೇಂದ್ರಗಳನ್ನು ಪ್ರಾರಂಭಿಸಲಾಗಿದ್ದು, ಈ ಕೇಂದ್ರಗಳ ಮೂಲಕ ಸಾರ್ವಜನಿಕರು ದಿನನಿತ್ಯದ ಕಾನೂನು ಸಮಸ್ಯೆಗಳನ್ನು ಪರಿಹರಿಸಿಕೊಳ್ಳಬಹುದಾಗಿದೆಃ

1) ಬೆಂಗಳೂರು ನಗರದಲ್ಲಿರುವ **ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರದ ಕೇಂದ್ರ ಕಾರ್ಯಾಲಯ**ದಲ್ಲಿ ಉಚಿತ ಕಾನೂನು ಸಲಹೆಯನ್ನು ಪ್ರತಿ ಕೆಲಸದ ದಿನ ಬೆಳಿಗ್ಗೆ 10.00 ರಿಂದ ಸಂಜೆ 5.30 ಗಂಟೆಯವರೆಗೆ ಪಡೆಯಬಹುದಾಗಿದೆ

2) ಬೆಂಗಳೂರು **ಅರಮನೆ ರಸ್ತೆ**ಯಲ್ಲಿರುವ "ತಾಂತ್ರಿಕ ಶಿಕ್ಷಣ ಭವನ" ನೆಲ ಮಹಡಿಯಲ್ಲಿರುವ “24 ಗಂಟೆಗಳ ಕಾನೂನು ಸಲಹಾ ಕೇಂದ್ರ” ದಲ್ಲಿ ಉಚಿತ ಕಾನೂನು ಸಲಹೆಯನ್ನು ಪ್ರತಿ ಕೆಲಸದ ದಿನ ಬೆಳಿಗ್ಗೆ 10.00 ರಿಂದ ಸಂಜೆ 5.30 ವರೆಗೆ ಪಡೆಯಬಹುದಾಗಿದೆ
3) ಬೆಂಗಳೂರು ನಗರ **ಆರಕ್ಷಕ ಆಯುಕ್ತರ ಕಛೇರಿ** ಆವರಣದಲ್ಲಿರುವ "ವನಿತಾ ಸಹಾಯವಾಣಿ" ಕೇಂದ್ರದಲ್ಲಿರುವ ಉಚಿತ ಕಾನೂನು ಸೇವಾ ಕೇಂದ್ರದಲ್ಲಿ ಪ್ರತಿ ಬುಧವಾರ ಬೆಳಿಗ್ಗೆ 11.00 ರಿಂದ ಮಧ್ಯಾಹ್ನ 3.00 ವರೆಗೆ ಉಚಿತ ಕಾನೂನು ಸಲಹೆಯನ್ನು ಪಡೆಯಬಹುದಾಗಿದೆ
4) ಬೆಂಗಳೂರು ನಗರದ **ವಿಲ್ಸನ್ ಗಾರ್ಡನ್**ನಲ್ಲಿರುವ "ಅಭಯಾಶ್ರಮ" ದಲ್ಲಿ ಉಚಿತ ಕಾನೂನು ಸಲಹಾ ಕೇಂದ್ರ ಪ್ರತಿ ಶುಕ್ರವಾರ ಬೆಳಿಗ್ಗೆ 11.00 ರಿಂದ ಮಧ್ಯಾಹ್ನ 3.00 ವರೆಗೆ ಉಚಿತ ಕಾನೂನು ಸಲಹೆಯನ್ನು ಪಡೆಯಬಹುದಾಗಿದೆ
5) ಬೆಂಗಳೂರಿನ **ಸಂಜಯಗಾಂಧಿನಗರ**ದಲ್ಲಿರುವ ಭೀಮಾಬಾಯಿ ಅಂಬೇಡ್ಕರ್ ಮಹಿಳಾ ವೇದಿಕೆ ಕಛೇರಿಯಲ್ಲಿ ಪ್ರತಿ ಭಾನುವಾರ ಸಮಯ ಬೆಳಿಗ್ಗೆ 11.00 ರಿಂದ 3.00 ವರೆಗೆ ಉಚಿತ ಕಾನೂನು ಸಲಹೆಯನ್ನು ಪಡೆಯಬಹುದಾಗಿದೆ
6) ಬೆಂಗಳೂರಿನಲ್ಲಿರುವ ರಾಷ್ಟ್ರೀಯ ಮಾನಸಿಕ ಆರೋಗ್ಯ ಮತ್ತು ನರವಿಜ್ಞಾನ ಸಂಸ್ಥೆಯ **(NIMHANS)** ಹೊರರೋಗಿಯ ವಿಭಾಗದ ಉಚಿತ ಕಾನೂನು ಸಲಹಾ ಕೇಂದ್ರದಲ್ಲಿ ಪ್ರತಿ ಮಂಗಳವಾರ ಮತ್ತು ಶುಕ್ರವಾರ ಸಮಯ 3.00 ರಿಂದ ಸಂಜೆ 5.30 ವರೆಗೆ ಉಚಿತ ಕಾನೂನು ಸಲಹೆಯನ್ನು ಪಡೆಯಬಹುದಾಗಿದೆ

7) ಧಾರವಾಡ ದಲ್ಲಿರುವ ರಾಷ್ಟ್ರೀಯ ಮಾನಸಿಕ ಆರೋಗ್ಯ ಮತ್ತು ನರವಿಜ್ಞಾನ ಸಂಸ್ಥೆಯ **(DIMHANS)** ಹೊರರೋಗಿಯ ವಿಭಾಗದ ಉಚಿತ ಕಾನೂನು ಸಲಹಾ ಕೇಂದ್ರದಲ್ಲಿ ಪ್ರತಿ ಸೋಮವಾರ ಮತ್ತು ಗುರುವಾರ ಬೆಳಿಗ್ಗೆ 9.00 ರಿಂದ 12.00 ವರೆಗೆ ಉಚಿತ ಕಾನೂನು ಸಲಹೆಯನ್ನು ಪಡೆಯಬಹುದಾಗಿದೆ

8) ಬೆಂಗಳೂರು **ಕೇಂದ್ರ ಕಾರಾಗೃಹ**ದಲ್ಲಿ ಹಾಗೂ ಉಳಿದ ಜಿಲ್ಲೆಗಳಲ್ಲಿರುವ ಕೇಂದ್ರ ಕಾರಾಗೃಹ ಹಾಗೂ **ಉಪಕಾರಾಗೃಹ**ಗಳಲ್ಲಿ ಉಚಿತ ಕಾನೂನು ಸಲಹಾ ಕೇಂದ್ರದ ಮೂಲಕ ಪ್ರತಿ ಉಚಿತ ಕಾನೂನು ಸಲಹೆಯನ್ನು ಪಡೆಯಬಹುದಾಗಿದೆ

9) ರಾಜ್ಯದ ಎಲ್ಲಾ ಜಿಲ್ಲಾ ಕೇಂದ್ರಗಳಲ್ಲಿರುವ ನ್ಯಾಯಾಲಯದ ಆವರಣದಲ್ಲಿ **ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ** ಕಾರ್ಯಾಲಯಗಳಲ್ಲಿರುವ **ಉಚಿತ ಕಾನೂನು ಸಲಹಾ ಕೇಂದ್ರ**ಗಳ ಮೂಲಕ ಪ್ರತಿ ಕೆಲಸದ ದಿನ 10.00 ರಿಂದ 5.45 ವರೆಗೆ ಉಚಿತ ಕಾನೂನು ಸಲಹೆಯನ್ನು ಪಡೆಯಬಹುದಾಗಿದೆ

10) ರಾಜ್ಯದ ಎಲ್ಲಾ ತಾಲ್ಲೂಕು ಕೇಂದ್ರಗಳಲ್ಲಿರುವ ಸಿವಿಲ್ ನ್ಯಾಯಾಲಯದ ಆವರಣದಲ್ಲಿ **ತಾಲ್ಲೂಕು ಕಾನೂನು ಸೇವಾ ಸಮಿತಿ**ಯ ಕಾರ್ಯಾಲಯಗಳಲ್ಲಿರುವ ಉಚಿತ ಕಾನೂನು ಸಲಹಾ ಕೇಂದ್ರಗಳ ಮೂಲಕ ಪ್ರತಿ ಕೆಲಸ ದಿನ ಬೆಳಿಗ್ಗೆ 10.00 ರಿಂದ 5.45 ವರೆಗೆ ಉಚಿತ ಕಾನೂನು ಸಲಹೆಯನ್ನು ಪಡೆಯಬಹುದಾಗಿದೆ

11) ರಾಜ್ಯದ ಎಲ್ಲಾ ಜಿಲ್ಲಾ ಕೇಂದ್ರ ಮತ್ತು ತಾಲ್ಲೂಕು ಕೇಂದ್ರಗಳಲ್ಲಿರುವ **ಮಕ್ಕಳ ಅಭಿವೃದ್ಧಿ ಯೋಜನಾಧಿಕಾರಿಗಳ ಕಾರ್ಯಾಲಯ**ದಲ್ಲಿ ಉಚಿತ ಕಾನೂನು ಸಲಹೆ ಕೇಂದ್ರದಲ್ಲಿ ಪ್ರತಿ ಬುಧವಾರ ಮತ್ತು ಶನಿವಾರ ಮಧ್ಯಾಹ್ನ 3.00 ರಿಂದ ಸಂಜೆ 5.30 ಗಂಟೆಯವರೆಗೆ ಉಚಿತ ಕಾನೂನು ಸೇವೆಯನ್ನು ಪಡೆಯಬಹುದು

12) ರಾಜ್ಯದ **ಕಾನೂನು ಮಹಾ ವಿದ್ಯಾಲಯಗಳಲ್ಲಿ ಉಚಿತ ಕಾನೂನು ಸಲಹಾ ಕೇಂದ್ರದ** ಮೂಲಕ ಸಲಹೆಯನ್ನು ಕೊಡಲಾಗುವುದು

## ಉಚಿತ ಕಾನೂನು ನೆರವು ಅಥವಾ ಸಲಹೆ ಪಡೆಯಲು ಏನು ಮಾಡಬೇಕು ?

- ನಿಮ್ಮ ಸಮೀಪದ ನ್ಯಾಯಾಲಯದ ಆವರಣದಲ್ಲಿರುವ **ಜಿಲ್ಲಾ ಕಾನೂನು ಸೇವೆಗಳ** ಕಾರ್ಯಾಲಯಕ್ಕೆ, **ತಾಲ್ಲೂಕು ಕಾನೂನು ಸೇವಾ** ಸಮಿತಿಗೆ, ಉಚ್ಚ ನ್ಯಾಯಾಲಯ, ಬೆಂಗಳೂರು ಆವರಣದಲ್ಲಿರುವ ಉಚಿತ ಕಾನೂನು ಸೇವಾ ಸಮಿತಿ ಹಾಗೂ **ಧಾರವಾಡ ಮತ್ತು ಗುಲ್ಬರ್ಗಾ ಸಂಚಾರಿ ನ್ಯಾಯಪೀಠ**ದಲ್ಲಿರುವ ಉಚ್ಛ ನ್ಯಾಯಾಲಯದ ಉಚಿತ ಕಾನೂನು ಸೇವಾ ಸಮಿತಿಗಳಿಗೆ ಕಾನೂನು ಸೇವೆಗಾಗಿ ನಿಗಧಿತ ನಮೂನೆಯಲ್ಲಿ ಅರ್ಜಿ ಸಲ್ಲಿಸಬೇಕು
- ಈ ಅರ್ಜಿಗೆ ಯಾವುದೇ ಶುಲ್ಕವಿಲ್ಲ
- ನಿಮ್ಮ ಜಾತಿ ಅಥವಾ ಆದಾಯಕ್ಕೆ ಸಂಬಂಧಿಸಿದಂತೆ ಸರ್ಟಿಫಿಕೇಟನ್ನು (ಧೃಢೀಕರಣ ಪತ್ರವನ್ನು) ತರಬೇಕಿಲ್ಲ.
- ಈ ಬಗ್ಗೆ ಒಂದು ಪ್ರಮಾಣ ಪತ್ರವನ್ನು (ಅಫಿಡವಿಟ್) ಸಲ್ಲಿಸಿದರೆ ಸಾಕು.

## ಜನತಾ ನ್ಯಾಯಾಲಯ (ಲೋಕ ಅದಾಲತ್):

- ಪ್ರಕರಣವೊಂದರ ಉಭಯ ಪಕ್ಷಕಾರರಲ್ಲಿ ರಾಜೀ ಸಂಧಾನ ಏರ್ಪಡಿಸುವ ಮೂಲಕ ಪ್ರಕರಣಗಳನ್ನು ಇತ್ಯರ್ಥಗೊಳಿಸುವ ಉದ್ದೇಶದಿಂದ ಉಚ್ಚ ನ್ಯಾಯಾಲಯ ಕಾನೂನು ಸೇವಾ ಸಮಿತಿ ಅಥವಾ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಅಥವಾ ತಾಲ್ಲೂಕು ಕಾನೂನು ಸೇವಾ ಸಮಿತಿ ರಚಿಸುವ ನ್ಯಾಯಾಲಯವೇ "ಜನತಾ ನ್ಯಾಯಾಲಯ" (ಲೋಕ ಅದಾಲತ್)

## ಜನತಾ ನ್ಯಾಯಾಲಯಗಳಲ್ಲಿ ಎಂತಹ ಪ್ರಕರಣಗಳನ್ನು ಇತ್ಯಾರ್ಥಗೊಳಿಸಲಾಗುತ್ತದೆ?

### ಕೋರ್ಟ್‌ನಲ್ಲಿ ಇತ್ಯರ್ಥಕ್ಕಾಗಿ ಬಾಕಿ ಇರುವ :

- ಮೋಟಾರು ವಾಹನ ಅಪಘಾತ ಪರಿಹಾರದ ಪ್ರಕರಣಗಳು (M.V.C)
- ಭೂ ಸ್ವಾಧೀನ ಸಂಬಂಧ ಪ್ರಕರಣಗಳು, ಪುರಸಭೆ, ಪಂಚಾಯಿತಿ, ವಿದ್ಯುತ್ ಮಂಡಳಿ ಮುಂತಾದ ಸ್ಥಳೀಯ ಸಂಸ್ಥೆಗಳ ಪರ ಮತ್ತು ವಿರುದ್ಧ ದಾಖಲಾದ ಪ್ರಕರಣಗಳು
- ಬ್ಯಾಂಕುಗಳಿಗೆ ಸಂಬಂಧಿಸಿದ ಪ್ರಕರಣಗಳು
- ವೈವಾಹಿಕ ಅಥವಾ ಜೀವನಾಂಶ ಪ್ರಕರಣಗಳು
- ಕಾನೂನಿನನ್ವಯ ರಾಜೀ ಆಗಬಹುದಾದ ಕ್ರಿಮಿನಲ್ ಪ್ರಕರಣಗಳು
- ಕಾರ್ಮಿಕ ನಷ್ಟ ಪರಿಹಾರ ಪ್ರಕರಣಗಳು
- ಗ್ರಾಹಕರ ವಿವಾದಗಳಿಗೆ ಸಂಬಂಧಿಸಿದ ಪ್ರಕರಣಗಳು
- ರಾಜಿ ಆಗಬಹುದಾದ ಎಲ್ಲಾ ವಿಧದ ಪ್ರಕರಣಗಳನ್ನು ಜನತಾ ನ್ಯಾಯಾಲಯಗಳ ಮೂಲಕ ಇತ್ಯರ್ಥಪಡಿಸಿಕೊಳ್ಳಬಹುದು

### ಜನತಾ ನ್ಯಾಯಾಲಯಗಳ ವೈಶಿಷ್ಟ್ಯ :

- ನಿಮ್ಮ ವ್ಯಾಜ್ಯವನ್ನು ಜನತಾ ನ್ಯಾಯಾಲಯದ (ಲೋಕ ಅದಾಲತ್‌ನ) ಮೂಲಕ ಶೀಘ್ರವಾಗಿ ಇತ್ಯಾರ್ಥಗೊಳಿಸಿಕೊಳ್ಳಬಹುದು
- ಇಲ್ಲಿ ಯಾವುದೇ ಕೋರ್ಟ್ ಫೀಜು (ನ್ಯಾಯಾಲಯ ಶುಲ್ಕ) ಕೊಡಬೇಕಿಲ್ಲ
- ಜನತಾ ನ್ಯಾಯಾಲಯದಲ್ಲಿ ನೀವು ವಕೀಲರ ಮುಖಾಂತರವೇ ಭಾಗವಹಿಸಬೇಕೆನ್ನುವ ನಿಯಮವೇನೂ ಇಲ್ಲ. ನೀವೇ ನೇರವಾಗಿ ಭಾಗವಹಿಸಬಹದು
- ನಿಮ್ಮ ಪ್ರಕರಣದಲ್ಲಿ ನಿಮಗೆ ಮಾರ್ಗದರ್ಶನ ನೀಡಿ ರಾಜೀ ಸಂಧಾನ ಏರ್ಪಡಿಸಲು ಜನತಾ ನ್ಯಾಯಾಲಯದಲ್ಲಿ ಇಬ್ಬರು ಸಂಧಾನಕಾರರಿದ್ದು ಅವರಲ್ಲಿ ಒಬ್ಬರು ನ್ಯಾಯಾಧೀಶರೇ ಆಗಿರುತ್ತಾರೆ
- ಸಂಧಾನಕಾರರು ಸೂಚಿಸುವ ಪರಿಹಾರ ನಿಮಗೆ ತೃಪ್ತಿಯಾದಲ್ಲಿ ಮಾತ್ರ ನೀವು ರಾಜಿ ಮಾಡಿಕೊಳ್ಳಬಹುದು

## ಖಾಯಂ ಜನತಾ ನ್ಯಾಯಾಲಯಗಳು (Permanent Lok Adalat)

ಸಾರ್ವಜನಿಕ ಉಪಯುಕ್ತ ಸೇವೆಗಳಿಗೆ ಸಂಬಂಧಿಸಿದಂತೆ ನ್ಯಾಯಾಲಯದಲ್ಲಿ ದಾಖಲಾಗದ ವಿವಾದಗಳನ್ನು ಬೇಗ ಇತ್ಯರ್ಥಪಡಿಸುವುದಕ್ಕಾಗಿ ಕಾನೂನು ಸೇವೆಗಳ ಪ್ರಾಧಿಕಾರದ ಅಧಿನಿಯಮದ ಅಡಿಯಲ್ಲಿ ಖಾಯಂ ಜನತಾ ಅದಾಲತ್ (Permanent Lok Adalat) ಗಳನ್ನು ಸ್ಥಾಪಿಸಿದ್ದು ಇವು **ಸಾರ್ವಜನಿಕ ಉಪಯುಕ್ತ ಸೇವೆಗಳಿಗೆ ಸಂಬಂಧಿಸಿದ ವಿವಾದಗಳನ್ನು** ಮಾತ್ರ ಇತ್ಯರ್ಥಗೊಳಿಸುತ್ತವೆ. ಈ ಅದಾಲತ್‌ಗಳಿಗೆ ಬರುವ ಪ್ರಕರಣಗಳಲ್ಲಿ ವಿವಾದಕ್ಕೊಳಗಾದ ಸ್ವತ್ತಿನ ಮೌಲ್ಯ ಹಾಗೂ ಹಣಕಾಸು ಸಂಸ್ಥೆಗಳ ವ್ಯವಹಾರಕ್ಕೆ ಸಂಬಂಧಪಟ್ಟಂತೆ ಮೌಲ್ಯ **ಇಪ್ಪತ್ತೈದು ಲಕ್ಷ ರೂಪಾಯಿಗಳನ್ನು** (Rs. 25 Lakh) ಮೀರಿರಬಾರದು. ಈ ಅದಾಲತ್‌ಗಳಲ್ಲಿ ಉಭಯ ಪಕ್ಷಕಾರರು ರಾಜಿ ಮಾಡಿಕೊಳ್ಳಲು ಮಾರ್ಗದರ್ಶನ ನೀಡಲಾಗುವುದು. ರಾಜಿ ಸಂಧಾನ

ವಿಫಲವಾದರೆ ಆ ಪ್ರಕರಣದ ವಿಚಾರಣೆ ನಡೆಸಿ ಅದನ್ನು ಇತ್ಯರ್ಥಗೊಳಿಸಲಾಗುವುದು. **ಪ್ರಯಾಣಿಕರನ್ನು ಅಥವಾ ಸರಕನ್ನು ಸಾಗಿಸುವ ಸಾಗಣೆ ಸೇವೆ** (ರೈಲ್ವೆ ಸಾಗಣೆ ಬಿಟ್ಟು) **ಅಂಚೆ, ತಂತಿ, ದೂರವಾಣಿ ಸೇವೆ,** ಸಾರ್ವಜನಿಕ ಸೇವೆ ಅಂದರೆ **ವಿದ್ಯುತ್** ಅಥವಾ ಕರೆಂಟ್ ಅಥವಾ ಬೆಳಕು, **ನೀರು ಸರಬರಾಜು** ಮಾಡುವ ಯಾವುದೇ ಸಂಸ್ಥೆ, **ಸಾರ್ವಜನಿಕ ನೈರ್ಮಲ್ಯ** ವ್ಯವಸ್ಥೆ, **ವಿಮಾ ಸೇವೆ, ಆಸ್ಪತ್ರೆ ಅಥವಾ ಔಷಧಾಲಯ**ದಲ್ಲಿಯ ಸೇವೆ ಮತ್ತು **ಹಣಕಾಸು ಸಂಸ್ಥೆ**ಗಳಿಗೆ ಸಂಬಂಧಪಟ್ಟ ಪ್ರಕರಣಗಳು ಇವುಗಳನ್ನು "ಸಾರ್ವಜನಿಕ ಉಪಯುಕ್ತ ಸೇವೆ"ಗಳೆಂದು ಪರಿಗಣಿಸಲಾಗಿದೆ. ಇವುಗಳಲ್ಲದೆ ಸಾರ್ವಜನಿಕ ಹಿತಾಸಕ್ತಿಯ ದೃಷ್ಠಿಯಿಂದ ರಾಜ್ಯ ಅಥವಾ ಕೇಂದ್ರ ಸರ್ಕಾರ ಬೇರೆ ಯಾವುದೇ ಸೇವೆಯನ್ನು ಇವುಗಳ ಪಟ್ಟಿಗೆ ಸೇರಿಸಬಹುದಾಗಿದೆ.

**ಬೆಂಗಳೂರು, ಮೈಸೂರು, ಮಂಗಳೂರು, ಧಾರವಾಡ, ಬೆಳಗಾವಿ ಹಾಗೂ ಗುಲ್ಬರ್ಗಾ**ಗಳಲ್ಲಿ ಖಾಯಂ ಜನತಾ ನ್ಯಾಯಾಲಯಗಳು ಕಾರ್ಯನಿರ್ವಹಿಸುತ್ತಿವೆ.

## ಜಿಲ್ಲಾ ಮಧ್ಯಸ್ಥಿಕೆ ಕೇಂದ್ರ : (District Mediation Centre)

ಮಧ್ಯಸ್ಥಿಕೆಯು ವಿವಾದ ಹೊಂದಿರುವ ಪಕ್ಷಕಾರರು ವಿಚಾರಣೆಗೆ ಹೋಗದೆ ತಮ್ಮ ವಿವಾದವನ್ನು ಸೃಜನಾತ್ಮಕವಾಗಿ ಇತ್ಯರ್ಥಪಡಿಸಿಕೊಳ್ಳಲು ಸಹಾಯ ಮಾಡುವ ಒಂದು ಪ್ರಕ್ರಿಯೆಯಾಗಿದೆ. ವಿವಾದ ಇತ್ಯರ್ಥಕ್ಕೆ ಮಧ್ಯಸ್ಥಿಕೆಯ ಎಲ್ಲಾ ಪಕ್ಷಕಾರರು ಹಾಗೂ ಅವರ ವಕೀಲರು ಸಕ್ರೀಯವಾಗಿ ಪಾಲ್ಗೊಳ್ಳುವಂತಹ ಒಂದು ವಿಶಿಷ್ಟ ಅವಕಾಶವನ್ನು ಇದು ಕಲ್ಪಿಸುತ್ತದೆ. ಮಧ್ಯಸ್ಥಿಕೆಯಲ್ಲಿ ನಿರ್ಧಾರ ಕೈಗೊಳ್ಳುವ ಅಧಿಕಾರವು ಯಾವಾಗಲೂ ಪಕ್ಷಕಾರರದ್ದೇ ಆಗಿರುತ್ತದೆ. ಮಧ್ಯಸ್ಥಗಾರರು ವಿವಾದವೆತ್ತಿರುವ ಪಕ್ಷಕಾರರನ್ನು ವಿವಾದಕ್ಕೊಳಗಾಗಿರುವ ವಿಷಯವನ್ನು ಅರ್ಥ ಮಾಡಿಕೊಂಡು ಇತ್ಯರ್ಥಕ್ಕೆ ಬರಲು ಇರುವ ಅಡ್ಡಿ ಆತಂಕಗಳನ್ನು ನಿವಾರಿಸಲು ಪ್ರಯತ್ನ ಮಾಡುತ್ತಾರೆ. ಮಧ್ಯಸ್ಥಿಕೆಯು ಸ್ವಪ್ರೇರಿತವಾದದ್ದಾಗಿರುತ್ತದೆ. ಮಧ್ಯಸ್ಥಿಕೆಯು ಯಾವಾಗಲೂ ಪಾರದರ್ಶಕವಾಗಿರುತ್ತದೆ. ಮಧ್ಯಸ್ಥಿಕೆಯಲ್ಲಿ ಹಣ ಮತ್ತು ಸಮಯ ಪೋಲಾಗುವುದಿಲ್ಲ. ಮಧ್ಯಸ್ಥಿಕೆಯಲ್ಲಿ ನಿಯಮ ಹಾಗೂ ಸಾಕ್ಷ್ಯಕ್ಕೆ ಬದಲಾಗಿ ಪಕ್ಷಕಾರರ ಹಿತಾಸಕ್ತಿಗಳ ಬಗೆಗೆ ಗಮನ ಹರಿಸಲಾಗುವುದು. ಮಧ್ಯಸ್ಥಿಕೆಯು ಪಕ್ಷಕಾರರು ತಾವೇ ವಿವಾದವನ್ನು ಇತ್ಯರ್ಥಗೊಳಿಸಿಕೊಳ್ಳಲು ಶಕ್ತರಾಗುವಂತೆ ಮಾಡುತ್ತದೆ. ಪ್ರಕರಣದ ಇತ್ಯರ್ಥ ಸಾಧ್ಯವಾಗದಿದ್ದಲ್ಲಿ ನ್ಯಾಯ ನಿರ್ಣಯಕ್ಕಾಗಿ ಅದನ್ನು ಮಧ್ಯಸ್ಥಿಕೆಗಾಗಿ ಕಳುಹಿಸಿದ ನ್ಯಾಯಾಲಯಕ್ಕೆ ವಾಪಸ್ಸು ಕಳುಹಿಸಲಾಗುವುದು. ಪ್ರತಿ ಜಿಲ್ಲೆಯಲ್ಲಿ ಜಿಲ್ಲಾ ಮಧ್ಯಸ್ಥಿಕೆ ಕೇಂದ್ರವನ್ನು ಸ್ಥಾಪಿಸಲಾಗಿದೆ. ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಕಾರ್ಯಾಲಯವನ್ನು ಸಂಪರ್ಕಿಸಬಹುದು.

## ಪರ್ಯಾಯ ವ್ಯಾಜ್ಯಗಳ ಪರಿಹಾರ ಕೇಂದ್ರ : (A.D.R)

ಸದರಿ ಕೇಂದ್ರಗಳ ಮೂಲಕವೂ ಸಹ ನ್ಯಾಯಾಲಯದಲ್ಲಿ ಬಾಕಿ ಇರುವ ಪ್ರಕರಣಗಳನ್ನು ಪರಿಹರಿಸಿಕೊಳ್ಳುವ ವ್ಯವಸ್ಥೆ ಮಾಡಲಾಗಿದೆ.

## ರಾಜೀ ಸಂಧಾನ/ವ್ಯಾಜ್ಯ ಪೂರ್ವ ಪ್ರಕರಣಃ (Pre-Litigation Cases)

ಸಾರ್ವಜನಿಕರು ಕಾನೂನು ಹಾಗೂ ಇತರೆ ಸಮಸ್ಯೆಗಳ ಬಗ್ಗೆ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಮತ್ತು ತಾಲ್ಲೂಕು ಕಾನೂನು ಸೇವೆಗಳ ಸಮಿತಿಯ ಕಾರ್ಯಾಲಯಗಳಿಗೆ ಭೇಟಿ ನೀಡಿ ಅರ್ಜಿ ಸಲ್ಲಿಸಿದ್ದಲ್ಲಿ ಅವರ ಸಮಸ್ಯೆಗಳನ್ನು ಕಾನೂನು ಸೇವೆಗಳ ಪ್ರಾಧಿಕಾರದ ಕಾಯ್ದೆ ಕಲಂ 19 (5)ರ ಪ್ರಕಾರ ಪರಿಹರಿಸಲು ವ್ಯವಸ್ಥೆ ಮಾಡಲಾಗುವುದು.

## ಸ್ವಪ್ರೇರಿತ ಕಾನೂನು ಸಹಾಯಕರುಃ
## (ಪ್ಯಾರಾ ಲೀಗಲ್ ವಾಲಂಟೀಯರ್ಸ್)

ಕಾನೂನು ಸಹಾಯಕರಾಗಿ ತರಬೇತಿ ಪಡೆದವರು ಕಾನೂನು ಸೇವೆಗಳ ಪ್ರಾಧಿಕಾರಗಳ ಹಾಗೂ ಅರ್ಹ ನಾಗರೀಕರ ನಡುವೆ ಪರಿಣಾಮಕಾರಿ ಸಮನ್ವಯಕಾರರಾಗಿ ಕಾರ್ಯನಿರ್ವಹಿಸುತ್ತಾರೆ.

ಸ್ವಪ್ರೇರಿತ ಕಾನೂನು ಸ್ವಯಂ ಸೇವಕರು ತಮ್ಮ ಸುತ್ತಮುತ್ತಲಿನ ಪ್ರದೇಶದ ಶೋಷಿತ ಹಾಗೂ ತುಳಿತಕ್ಕೊಳಗಾದ ಜನರ ಸೇವೆ ಮಾಡಲು ಅರ್ಪಣಾ ಮನೋಭಾವ ಹೊಂದಿರುತ್ತಾರೆ. ಇವರು ಸರ್ಕಾರದ ವಿವಿಧ ಯೋಜನೆಗಳು, ಆದೇಶಗಳು, ಶಾಸನಗಳು, ಸಾರ್ವಜನಿಕ ಹಿತಾಸಕ್ತಿ ಮೊಕದ್ದಮೆಗಳು, ಜನತಾ ನ್ಯಾಯಾಲಯಗಳು, ಪರ್ಯಾಯ ವಿವಾದ ಪರಿಹಾರ ವ್ಯವಸ್ಥೆ, ಉಚಿತ ಕಾನೂನು ಸಹಾಯ ಮತ್ತು ಸೇವೆಗಳ ಬಗೆಗೆ ಅರಿವನ್ನುಂಟುಮಾಡುವ ಸೇವೆಯನ್ನು ಸಲ್ಲಿಸುವುದಲ್ಲದೇ ನಾಗರೀಕರ ಹಕ್ಕುಗಳು ಹಾಗೂ ಹೊಣೆಗಳ ಬಗೆಗೆ ಶಿಕ್ಷಣ ನೀಡುವುದು, ಸಮಸ್ಯೆಗಳಿಗೆ ಪರಿಹಾರ/ಸಲಹೆ ಕೋರಿ ಕಾನೂನು ಸೇವೆಗಳ ಪ್ರಾಧಿಕಾರವನ್ನು ಸಂಪರ್ಕಿಸುವ ಬಗೆಗೆ ಜನರಲ್ಲಿ ಅರಿವು ಮೂಡಿಸುವುದು, ತಮ್ಮ ಕಾರ್ಯಕ್ಷೇತ್ರದಲ್ಲಿ ನಡೆಯುವ ಕಾನೂನು ಉಲ್ಲಂಘನೆಯ ಹಾಗೂ ಅನ್ಯಾಯದ ಕಾರ್ಯಗಳ ಬಗೆಗೆ ಪರಿಣಾಮಕಾರಿ ಪರಿಹಾರ ಜರುಗಿಸಲು ಸಾಧ್ಯವಾಗುವಂತೆ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಅಥವಾ ತಾಲ್ಲೂಕ ಕಾನೂನು ಸೇವೆಗಳ ಸಮಿತಿಗೆ ಶೀಘ್ರವಾಗಿ ವರದಿ ಮಾಡುವುದು, ಕಾನೂನು ಅರಿವು ಶಿಬಿರಗಳನ್ನು ಬೇರೆಯವರ ಸಹಯೋಗದೊಂದಿಗೆ ವ್ಯವಸ್ಥೆಗೊಳಿಸುವುದು, ಕಾನೂನು ಸೇವೆಗಳ ಪ್ರಾಧಿಕಾರ/ಕಾನೂನು ಸೇವೆಗಳ ಸಮಿತಿಗಳು ಒದಗಿಸುವ ಸೇವೆಗಳ ಬಗೆಗೆ ಅರಿವನ್ನುಂಟುಮಾಡುವುದು, ಮಧ್ಯಸ್ಥಿಕೆ, ರಾಜಿ ಸಂಧಾನ ಮತ್ತು ಜನತಾ ನ್ಯಾಯಾಲಯಗಳ ಮೂಲಕ ವಿವಾದಗಳನ್ನು ಪರಿಹರಿಸಿಕೊಳ್ಳುವುದರಲ್ಲಿ ಇರುವ ಪ್ರಯೋಜನದ ಬಗೆಗೆ ನಾಗರೀಕರಿಗೆ ತಿಳುವಳಿಕೆ ನೀಡುವುದು, ಖಾಯಂ ಜನತಾ ನ್ಯಾಯಾಲಯಗಳಲ್ಲಿ ಸಾರ್ವಜನಿಕ ಉಪಯುಕ್ತ ಸೇವೆಗಳಿಗೆ ಸಂಬಂಧಿಸಿದಂತೆ ಮಾಹಿತಿ ನೀಡುವುದು ಮತ್ತು ಇತರೆ ಕೆಲಸಗಳಲ್ಲಿ ತೊಡಗಿಕೊಳ್ಳುವ ಸ್ವಪ್ರೇರಿತ ಕಾನೂನು ಸಹಾಯಕರು ಸಮಾಜದಲ್ಲಿಯ ಎಲ್ಲರಿಗೂ ನ್ಯಾಯ ದೊರಕಿಸುವ ಸಲುವಾಗಿ ಅರ್ಪಣಾ ಮನೋಭಾವದಿಂದ ಸದಾ ಶ್ರಮಿಸುತ್ತಿರುತ್ತಾರೆ.

## ವಿದ್ಯಾರ್ಥಿಗಳಿಗಾಗಿ ಕಾನೂನು ಸಾಕ್ಷರತೆ:

ಇಂದಿನ ವಿದ್ಯಾರ್ಥಿಗಳೇ ನಾಳಿನ ನಾಯಕರು ಎಂಬುದನ್ನು ಅರಿತು ವಿದ್ಯಾರ್ಥಿಗಳು ಈ ನಾಡಿನ ಜನಸಾಮಾನ್ಯರ ಜನಜೀವನದ ಭಾಗವಾಗಿರುವ ಕಾನೂನುಗಳ ಬಗೆಗೆ ಸಾಕ್ಷರತೆ ಸಾಧಿಸುವ ಸಲುವಾಗಿ 2006ರಲ್ಲಿ ಅಂದಿನ ಗೌರವಾನ್ವಿತ ರಾಷ್ಟ್ರಪತಿಗಳಾದ ಶ್ರೀ ಎ.ಪಿ.ಜೆ.ಅಬ್ದುಲ್

ಕಲಾಮ್‌ರವರು ಉದ್ಘಾಟಿಸಿದ ವಿದ್ಯಾರ್ಥಿಗಳ ಕಾನೂನು ಸಾಕ್ಷರತಾ ಕೂಟಗಳು ಇಂದು ರಾಜ್ಯಾದ್ಯಂತ ಹಬ್ಬಿ ಕಾರ್ಯನಿರ್ವಹಿಸುತ್ತಿವೆ. ರಾಜ್ಯಗಳಲ್ಲಿರುವ ಪ್ರೌಢಶಾಲೆಗಳು ಮತ್ತು ಪದವಿ ಕಾಲೇಜುಗಳಲ್ಲಿ ಕಾನೂನು ಸಾಕ್ಷರತಾ ಕೂಟಗಳು ವಿದ್ಯಾರ್ಥಿಗಳಲ್ಲಿ ಭಾರತದ ಸಂವಿಧಾನ ಮತ್ತು ಜನಸಾಮಾನ್ಯರ ದಿನನಿತ್ಯದ ಚಟುವಟಿಕೆಗಳಲ್ಲಿ ಹಾಸುಹೊಕ್ಕಾಗಿರುವ ಕಾನೂನುಗಳ ಬಗ್ಗೆ ಅರಿವು ಮೂಡಿಸಿ ಅವರ ಮೂಲಕ ಜನಸಾಮಾನ್ಯರಿಗೆ ಅವನ್ನು ತಲುಪಿಸುವ ಮಹತ್ತರ ಉದ್ದೇಶವನ್ನು ಹೊಂದಿದೆ. ಈಗ ಕರ್ನಾಟಕ ರಾಜ್ಯದಲ್ಲಿ **5102 ಕ್ಕಿಂತ ಮೇಲಾಗಿ ಕಾನೂನು ಸಾಕ್ಷರತಾ ಕೂಟಗಳು** ಕಾರ್ಯನಿರ್ವಹಿಸುತ್ತಿರುವುದು ಗಮನಾರ್ಹವಾಗಿದೆ.

## ಕಾನೂನು ಅರಿವು :

ಜನರಲ್ಲಿ ಕಾನೂನು ಅರಿವು ಮೂಡಿಸುವ ನಿಟ್ಟಿನಲ್ಲಿ ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರವು ಅನೇಕ ಪುಸ್ತಕಗಳು, ಕಿರು ಹೊತ್ತಿಗೆಗಳು ಹಾಗೂ ಕರಪತ್ರಗಳನ್ನು ಪ್ರಕಟಿಸಿ ಸಾರ್ವಜನಿಕರಿಗೆ ಉಚಿತವಾಗಿ ಇಲ್ಲವೆ ಅತ್ಯಂತ ಕಡಿಮೆ ಬೆಲೆಗೆ ವಿತರಿಸುತ್ತಾ ಬಂದಿದೆ. ಎಲ್ಲಾ ವರ್ಗದ ಜನರಿಗೆ ಕಾನೂನು ಕಾರ್ಯಾಗಾರ, ಕಾನೂನು ಕಮ್ಮಟಗಳನ್ನು ಸರ್ಕಾರೇತರ ಸಂಸ್ಥೆಗಳು, ಸರ್ಕಾರದ ವಿವಿಧ ಇಲಾಖೆಗಳು ಹಾಗೂ ಇತರ ಸ್ವಯಂ ಸೇವಾ ಸಂಸ್ಥೆಗಳ ಸಹಯೋಗದೊಂದಿಗೆ ಏರ್ಪಡಿಸುವುದರ ಜೊತೆಗೆ ಕಾನೂನು ಗೀತೆಗಳು, ಧ್ವನಿ ಸುರುಳಿಗಳು, ನಾಟಕಗಳು ಹಾಗೂ ಟೆಲಿ ನಾಟಕಗಳ ಮೂಲಕ ಜನರಲ್ಲಿ ಕಾನೂನಿನ ಬಗೆಗೆ ಅರಿವನ್ನುಂಟು ಮಾಡಲು ಪ್ರಾಧಿಕಾರವು ನಿರಂತರವಾಗಿ ಶ್ರಮಿಸುತ್ತಿದೆ

## ಸಂಚಾರಿ ಕಾನೂನು ಸಾಕ್ಷರತಾ ರಥ ಃ

ನಮ್ಮ ನಾಡಿನಲ್ಲಿ ಮುಖ್ಯವಾಗಿ ಗ್ರಾಮೀಣ ಪ್ರದೇಶದಲ್ಲಿ ವಾಸಿಸುವರು ಕಾನೂನಿನ ಬಗ್ಗೆ ಅರಿವು ಮೂಡಿಸಿಕೊಳ್ಳಬೇಕೆಂಬ ತವಕವಿದ್ದರೂ ಸಹ ತಮ್ಮ ಜೀವನಾಧಾರವಾದ ಹಣ ಗಳಿಸುವುದಕ್ಕಾಗಿ ಬಿಡುವಿಲ್ಲದೆ ದುಡಿಯಬೇಕಿದ್ದು ಕಾನೂನು ಬಗ್ಗೆ ಮಾಹಿತಿ ಪಡೆಯಲು ಅದಕ್ಕಾಗಿ ಇರುವ ಕೇಂದ್ರಗಳಿಗೆ ಭೇಟಿ ನೀಡಲು ಅಶಕ್ತರಾಗಿರುತ್ತಾರೆ. ಇಂತಹ ಜನರನ್ನು ಗಮನದಲ್ಲಿರಿಸಿಕೊಂಡು ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರವು ಸಂಚಾರಿ ಕಾನೂನು ಸಾಕ್ಷರತಾ ರಥಗಳ (ಬಸ್) ಮೂಲಕ ಅವರುಗಳಿಗೆ ಕಾನೂನಿನ ಬಗ್ಗೆ ಮಾಹಿತಿ ನೀಡಿ ಅವರನ್ನು ಕಾನೂನು ಸಾಕ್ಷರರನ್ನಾಗಿಸಲು ಮೂರು ದೊಡ್ಡ ಹಾಗೂ ಒಂದು ಚಿಕ್ಕ "ಸಂಚಾರಿ ಕಾನೂನು ರಥ (ಬಸ್)" ಗಳನ್ನು ಹೊಂದಿದ್ದು ಅವುಗಳು ರಾಜ್ಯಾದ್ಯಂತ ವಿವಿಧ ಸ್ಥಳಗಳಲ್ಲಿ ಸಂಚರಿಸಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಮತ್ತು ತಾಲ್ಲೂಕು ಕಾನೂನು ಸೇವೆಗಳ ಸಮಿತಿಗಳ ಮೂಲಕ ಸ್ಥಳೀಯ ನ್ಯಾಯಾಧೀಶರು, ವಕೀಲರು ಮತ್ತು ಇತರರ ಮುಖಾಂತರ ಕಾನೂನು ಪ್ರಸಾರವನ್ನು ಪ್ರತಿ ದಿನ ಒಂದು ಬಸ್ಸಿನ ಮೂಲಕ ಮೂರು ಕಾನೂನು ಸಾಕ್ಷರತಾ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವ ಮೂಲಕ ಜನಸಾಮಾನ್ಯರನ್ನು ಕಾನೂನು ಸಾಕ್ಷರರನ್ನಾಗಿ ಮಾಡುವಲ್ಲಿ ಯಶಸ್ಸನ್ನು ಸಾಧಿಸುತ್ತಿವೆ. ಆ ಬಸ್‌ಗಳಲ್ಲಿ ಲೋಕ್ ಅದಾಲತ್‌ಗಳನ್ನು ಸಹ ಏರ್ಪಾಡು ಮಾಡಲಾಗಿರುತ್ತದೆ.

## ಸುಂಕಮುಕ್ತ [Toll Free] ಸಹಾಯವಾಣಿ ಟೋಲ್ ಫ್ರೀ ಲೀಗಲ್ ಹೆಲ್ಪ್‌ಲೈನ್ ಮುಖಾಂತರ ಉಚಿತ ಕಾನೂನು ಸಲಹೆಗಾಗಿ:

### ಟೋಲ್ ಫ್ರೀ ದೂರವಾಣಿ ಸಂಖ್ಯೆ: 1800-425-90900

ದಿನಾಂಕ: 16-10-2011 ರಂದು ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರವು ಉಚಿತ ಕಾನೂನು ಸಲಹೆಯನ್ನು ನೀಡುವ ಸಲುವಾಗಿ "ಟೋಲ್ ಫ್ರೀ" ಸಹಾಯವಾಣಿ ಸೇವೆಯನ್ನು ಆರಂಭಿಸಲಾಗಿದ್ದು ಈ ಸೇವೆಯ ಸೌಲಭ್ಯವನ್ನು 24 ಗಂಟೆಗಳ ನಿರಂತರವಾಗಿ ಸಾರ್ವಜನಿಕರು ಪಡೆಯಬಹುದಾಗಿರುತ್ತದೆ.

**ಹೆಚ್ಚಿನ ಮಾಹಿತಿಗಾಗಿ ಸಂಪರ್ಕಿಸಿ:**

ಸದಸ್ಯ ಕಾರ್ಯದರ್ಶಿಗಳು, ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರ
"ನ್ಯಾಯ ದೇಗುಲ", ಮೊದಲನೇ ಮಹಡಿ, ಹೆಚ್. ಸಿದ್ದಯ್ಯ ರಸ್ತೆ, ಬೆಂಗಳೂರು-560 027
ದೂರವಾಣಿ ಸಂಖ್ಯೆ 080-22111729, ಫ್ಯಾಕ್ಸ್ ನಂ. 080-22112935
E-mail: karslsa@gmail.com, kslsa1997@gmail.com

ಅಥವಾ

**ಈ ಕೆಳಕಂಡ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಕಾರ್ಯಾಲಯಕ್ಕೆ ಹಾಗೂ ಕರ್ನಾಟಕ ಉಚ್ಚ ನ್ಯಾಯಾಲಯದ ಕಾನೂನು ಸೇವಾ ಸಮಿತಿಗಳನ್ನು ಸಂಪರ್ಕಿಸಬಹುದು. ಟೋಲ್ ಫ್ರೀ ದೂರವಾಣಿ ಸಂಖ್ಯೆ: 1800-425-90900 ಇದನ್ನು ಸಹ ಸಂಪರ್ಕಿಸಬಹುದು.**

| | | | |
|---|---|---|---|
| ಕರ್ನಾಟಕ ಉಚ್ಚ ನ್ಯಾಯಾಲಯ, ಪ್ರಧಾನ ಪೀಠ, ಬೆಂಗಳೂರು | | | 080-22869988 |
| ಉಚ್ಚ ನ್ಯಾಯಾಲಯ ಸಂಚಾರಿ ಪೀಠ ಧಾರವಾಡ | | | 0836-2485242 |
| ಉಚ್ಚ ನ್ಯಾಯಾಲಯ ಸಂಚಾರಿ ಪೀಠ ಗುಲ್ಬರ್ಗಾ | | | 08472-264141 |
| ಬೆಂಗಳೂರು ನಗರ | 080-22212914 | ಬೆಂಗಳೂರು (ಗ್ರಾ) | 080-22214751 |
| ಬಾಗಲಕೋಟ | 08354-236228 | ಬೆಳಗಾವಿ | 0831-2420500 |
| ಬಳ್ಳಾರಿ | 08392-272155 | ಬೀದರ್ | 08482-226448 |
| ಬಿಜಾಪುರ | 08352-276140 | ಚಾಮರಾಜನಗರ | 08226-222990 |
| ಚಿಕ್ಕಬಳ್ಳಾಪುರ | 08156-270966 | ಚಿಕ್ಕಮಗಳೂರು | 08262-231066 |
| ಚಿತ್ರದುರ್ಗ | 08194-222352 | ಮಂಗಳೂರು(ದ.ಕ) | 0824-2444005 |
| ದಾವಣಗೆರೆ | 08192-252562 | ಧಾರವಾಡ | 0836-2448552 |
| ಗದಗ | 08372-252077 | ಗುಲ್ಬರ್ಗ | 08472-233590 |
| ಹಾಸನ್ | 08172-268352 | ಹಾವೇರಿ | 08375-232001 |
| ಕೊಡಗು(ಮಡಿಕೇರಿ) | 08272-225373 | ಕೋಲಾರ | 08152-222091 |
| ಕೊಪ್ಪಳ | 08539-221900 | ಮಂಡ್ಯ | 08232-224124 |
| ಮೈಸೂರು | 0821-2330452 | ರಾಯಚೂರು | 08532-228476 |
| ರಾಮನಗರ | 08113-7271449 | ಶಿವಮೊಗ್ಗ | 08182-270321 |
| ತುಮಕೂರು | 0816-2278273 | ಉಡುಪಿ | 0820-2530001 |
| ಕಾರವಾರ (ಉ.ಕ) | 08382-226325 | ಯಾದಗೀರ್ | 08473-253798 |

**ಖಾಯಂ ಜನತಾ ನ್ಯಾಯಾಲಯಗಳ ಕಾರ್ಯಾಲಯದ ದೂರವಾಣಿ ಸಂಖ್ಯೆಗಳು:**

| | | | |
|---|---|---|---|
| ಬೆಂಗಳೂರು | 080-22111726 | ಗುಲ್ಬರ್ಗ | 08472-255364 |
| ಬೆಳಗಾವಿ | 0831-2422300 | ಮೈಸೂರು | 0821-2330130 |
| ಧಾರವಾಡ | 0836-2442282 | ಮಂಗಳೂರು (ದ.ಕ) | 0824-2455349 |

**"ನ್ಯಾಯ ನಿಮ್ಮದು – ನೆರವು ನಮ್ಮದು"**